**10. ಮೌಖಿಕ ಪರೀಕ್ಷೆ:**

ಎ) ಅಭ್ಯರ್ಥಿಗಳು ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳನುಸಾರ ಅರ್ಹತಾ ಪಟ್ಟಿಯನ್ನು ತಯಾರಿಸಲಾಗುವುದು. ಸದರಿ ಅರ್ಹತಾ ಪಟ್ಟಿಯಿಂದ ಪ್ರತಿ ಹುದ್ದೆಗೆ 1:2ರ ಪ್ರಮಾಣದಲ್ಲಿ ಪ್ರತಿ ಗುಂಪು/ಪ್ರವರ್ಗಗಳನುಸಾರ 10 (ಹತ್ತು) ಅಂಕಗಳುಳ್ಳ ಮೌಖಿಕ ಪರೀಕ್ಷೆ / ವ್ಯಕ್ತಿತ್ವ ಪರೀಕ್ಷೆಗೆ ಕರೆಯಲಾಗುವುದು. ಅಭ್ಯರ್ಥಿಗಳು ಬೆಂಗಳೂರಿನ ನೇಮಕಾತಿ ಸಮಿತಿಯ ಮುಂದೆ ಎಲ್ಲಾ ಮೂಲ ದಾಖಲಾತಿಗಳೊಂದಿಗೆ ಸಂದರ್ಶನಕ್ಕೆ ಹಾಜರಾಗಬೇಕಾಗುತ್ತದೆ ಮತ್ತು ಜನ್ಮ ದಿನಾಂಕದ, ವಿದ್ಯಾರ್ಹತೆಯ ಹಾಗೂ ಕೋರಲಾದ ಮೀಸಲಾತಿ ಪ್ರಮಾಣ ಪತ್ರಗಳ ಎರಡು ಸೆಟ್‌ನ್ನು ಪತ್ರಾಂಕಿತ ಅಧಿಕಾರಿಯಿಂದ ದೃಢೀಕರಿಸಿಕೊಂಡು ತರಬೇಕಾಗಿರುತ್ತದೆ. ಈ ಮೌಖಿಕ ಪರೀಕ್ಷೆಗೆ ಕನಿಷ್ಠ ಅಂಕಗಳು ಇರುವುದಿಲ್ಲ. ಮೌಖಿಕ ಪರೀಕ್ಷೆಗೆ ಹಾಜರಾಗದಿರುವ ಅಭ್ಯರ್ಥಿಗಳು ಆಯ್ಕೆಗೆ ಅನರ್ಹರಾಗುವರು ಅಭ್ಯರ್ಥಿಗಳು ಮೂಲ ದಾಖಲಾತಿಗಳನ್ನು ಮೌಖಿಕ ಪರೀಕ್ಷೆ ಪ್ರಾರಂಭವಾಗುವ ಮುನ್ನ ಹಾಜರುಪಡಿಸಬೇಕು. ಅಭ್ಯರ್ಥಿಗಳು ಮೌಖಿಕ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳದ ಮಾಹಿತಿಯನ್ನು ಒಳಗೊಂಡ ಕರೆ ಪತ್ರವನ್ನು ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.inನಿಂದ ಪಡೆದುಕೊಳ್ಳಬೇಕು (Download). ಮೌಖಿಕ ಪರೀಕ್ಷೆಯು ನಡೆಯುವ ವೇಳೆ ಮತ್ತು ಸ್ಥಳವನ್ನು ಡಿಐಜಿಪಿ, ನೇಮಕಾತಿ ಮತ್ತು ತರಬೇತಿ, ಕಾರ್ಲಟನ್ ಭವನ, ಅರಮನೆ ರಸ್ತೆ, ಬೆಂಗಳೂರು ರವರ ಕಛೇರಿಯ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಮೌಖಿಕ ಪರೀಕ್ಷೆಗೆ ಬರುವಾಗ, ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

i) ಪಾಸ್‌ಪೋರ್ಟ್(Passport)

ii) ಚಾಲನಾ ಪರವಾನಗಿ ಪತ್ರ(Driving License)

iii) ಪ್ಯಾನ್ ಕಾರ್ಡ್(PAN Card)

iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ(Service ID Card)

v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ(Bank Pass Book with Photograph)

vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ(Pattas and registered deeds with Photograph)

vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ(Community Certificate with Photo)

viii) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ.(Job cards with Photograph)

ix) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC).

x) ಭಾರತೀಯ ಗುರುತು ಪ್ರಾಧಿಕಾರದಿಂದ ನೀಡಲಾಗಿರುವ ಆಧಾರ್ ಕಾರ್ಡ್.(AADHAR CARD).

ಬಿ) **ಮೌಖಿಕ ಪರೀಕ್ಷೆಗೆ ತರಬೇಕಾದ ದಾಖಲಾತಿಗಳು**: i) ಮೌಖಿಕ ಪರೀಕ್ಷೆಯ ಕರೆಪತ್ರ,ii) ಸಹಿಷ್ಣುತೆ ಮತ್ತು ದೈಹಿಕ ಸಾಮರ್ಥ್ಯ ಪರೀಕ್ಷೆಯ ಫಲಿತಾಂಶ ಹಾಳೆ, iii) ಗುರುತಿನ ಚೀಟಿ iv) ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿ, v) ಎಸ್‌ಎಸ್‌ಎಲ್‌ಸಿ ಮತ್ತು ಪದವಿ ಅಂಕಪಟ್ಟಿಗಳು/ ಪದವಿ ಪ್ರಮಾಣ ಪತ್ರ, vi) ಸಂಬಂಧಪಡುವ ಮೀಸಲಾತಿ ಪ್ರಮಾಣ ಪತ್ರಗಳನ್ನು ತರತಕ್ಕದ್ದು. ತಪ್ಪಿದ್ದಲ್ಲಿ ಮೌಖಿಕ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ.

ಸಿ) ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕವಾದ 16.07.2017ಕ್ಕೆ ಮುಂಚಿತವಾಗಿ ಅಭ್ಯರ್ಥಿಗಳು ಕೋರುವ ಮೀಸಲಾತಿಗಳ ಹಾಗೂ ಇತರೆ ಎಲ್ಲಾ ಪ್ರಮಾಣ ಪತ್ರಗಳ ದಾಖಲಾತಿಗಳನ್ನು ಪಡೆದಿಟ್ಟುಕೊಂಡಿರಬೇಕು. ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ನಂತರ ಪಡೆದುಕೊಂಡಿರುವ ಪ್ರಮಾಣ ಪತ್ರಗಳನ್ನು ಗಣನೆಗೆ ತೆಗೆದುಕೊಳ್ಳುವುದಿಲ್ಲ ಹಾಗೂ ಪರಿಗಣಿಸುವುದಿಲ್ಲ.